ಬೆಂಗಳೂರು ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಗಳಲ್ಲಿ ಕಲಿಕೆ ಚಾಲನಾ ಅನುಜ್ಞಾ ಪತ್ರಗಳ ನೀಡಿಕೆಯಲ್ಲಿ ವಿಳಂಬವಾಗಿರುವ ಬಗ್ಗೆ

೨೧೬. ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ).—ಮಾನ್ಯ ಆಹಾರ ಮಂತ್ರಿ, ನಾಗರೀಕ ಸರಬರಾಜು ಮಂತ್ರಿ, ಸಾರಿಗೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರಿನಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಗಳಲ್ಲಿ ಕಲಿಕೆ ಚಾಲನಾ ಅನುಜ್ಞಾ ಪತ್ರಗಳ ನೀಡಿಕೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಕಲಿಕೆ ಚಾಲನಾ ಅನುಜ್ಞಾ ಪತ್ರಗಳನ್ನು ಈ ಮುಂದಿನ ರೀತಿಯಲ್ಲಿ ಆ ದಿನವೇ ನೀಡುವಂತೆ ಕ್ರಮ ಕೈಗೊಳ್ಳಲಾಗುತ್ತಿದೆಯೆ?

ಶ್ರೀ ಕೆ.ಜೆ.ಜಾರ್ಜ್ (ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ಸಾರಿಗೆ ರಾಜ್ಯ ಮಂತ್ರಿಗಳು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಬೆಂಗಳೂರು ಬಸ್ ನಿಲ್ದಾಣದಲ್ಲಿ ಅಂಚೆ ಕಚೇರಿ ನಿರ್ಮಿಸುವ ಬಗ್ಗೆ

೨೧೭. ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ).—ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿ, ಸಾರಿಗೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ಬಸ್ ನಿಲ್ದಾಣದಲ್ಲಿ ಅಂಚೆ ಕಚೇರಿ ನಿರ್ಮಿಸಲು ಅಂಚೆ ಇಲಾಖೆಯವರು ಸ್ಥಲ್ಪ ಸ್ಥಳ ಕೊಡುವುದಕ್ಕೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯನ್ನು ಕೇಳಿರುವುದು ನಿಜವೇ?

ಆ) ಹಾಗಾದರೆ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಅಂಚೆ ಇಲಾಖೆಯವರಿಗೆ ಜಾಗ ಕೊಡಲು ಒಪ್ಪಿರುವುದೇ?

ಶ್ರೀ ಕೆ.ಜೆ. ಜಾರ್ಜ್ (ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಗಳು).—

ಅ) ಹೌದು.

ಆ) ಇಲ್ಲ.

ಏಕಸಂಖ್ಯೆ ದೈನಂದಿನ ಲಾಟರಿ ನಡೆಸುವ ಬಗ್ಗೆ

೨೨೨. ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ).—ಮಾನ್ಯ ಹಣಕಾಸು ಮಂತ್ರಿ, ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜಸ್ಥಾನ ಅರುಣಾಚಲ ಪ್ರದೇಶ, ಪಂಜಾಬ್, ಹರಿಯಾಣ ಇತ್ಯಾದಿ ಸರ್ಕಾರಗಳ ಲಕ್ಷಾಂತರ ರೂಪಾಯಿ ವಹಿವಾಟಿನ ಏಕಸಂಖ್ಯೆ ಲಾಟರಿ ಟಿಕೇಟುಗಳು ಕರ್ನಾಟಕದಲ್ಲಿ ಅದರಲ್ಲೂ ಬೆಂಗಳೂರಿನ ನಗರದಲ್ಲಿ ಪ್ರತಿದಿನ ಮಾರಾಟ ಮಾಡುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ?

ಆ) ಇತರ ರಾಜ್ಯಗಳಲ್ಲಿರುವಂತೆ ಏಕಸಂಖ್ಯೆ ದೈನಂದಿನ ಲಾಟರಿ ಡ್ರಾ ನಡೆಸಲು ಮತ್ತು ಇತರ ರಾಜ್ಯ ಗಳಲ್ಲಿ ಅದನ್ನು ಜನಪ್ರಿಯಗೊಳಿಸಲು ಸರ್ಕಾರವು ಉದ್ದೇಶಿಸಿದೆಯೇ?

ಶ್ರೀ ಎಂ. ರಾಜಶೇಖರಮೂರ್ತಿ (ಹಣಕಾಸು ಸಚಿವರು).

ಅ) ತಿಳಿದಿದೆ.

ಆ) ಇಲ್ಲ.